**ಶಿಕ್ಷಕರ ಮೇಲೆ ಅನೇಕ ಜವಾಬ್ದಾರಿಗಳನ್ನು ಹೇರುತ್ತಾ ಶಿಕ್ಷಕ ವೃತ್ತಿಯ ಘನತೆಯನ್ನೇ ಕುಗ್ಗಿಸಲಾಗುತ್ತಿದೆ...**



**ಗಿಡ ನೆಡಿ ಗಿಡ ನೆಡಿ...:** ನೆಮ್ಮದಿಯ ನಾಳೆಗಳಿಗಾಗಿ ಇಂದಿನ ಮಕ್ಕಳಿಗೆ ಹಸಿರು ಪಾಠ

‘ವಿಪರೀತ ಒತ್ತಡದಲ್ಲಿ ನಾವಿದ್ದೇವೆ. ಅದರ ಮೇಲೆ ಗ್ರಂಥಾಲಯ ಸಮೀಕ್ಷೆ, ಶೌಚಾಲಯ ಸಮೀಕ್ಷೆ, ಪಂಪ್‌ಸೆಟ್ ಸಮೀಕ್ಷೆ ಅಂತ ಏನೇನೋ ಹೊರೆ ಹಾಕುತ್ತಾರೆ. ನಮ್ಮನ್ನು ಎಲ್ಲ ಜವಾಬ್ದಾರಿಗಳಿಂದ ಮುಕ್ತಗೊಳಿಸಿ ನೈಜ ಕಾಯಕವಾದ ಬೋಧನಾ ವೃತ್ತಿಗೆ ಮಾತ್ರ ಸೀಮಿತಗೊಳಿಸಬೇಕು’ ಎಂದು ರಾಜ್ಯ ಶಿಕ್ಷಕರ ಸಂಘದ ಪ್ರಧಾನ ಕಾರ್ಯದರ್ಶಿ ಎನ್.ಎಸ್. ಚಂದ್ರಶೇಖರ್ ಆಶಿಸುತ್ತಾರೆ. ಶಿಕ್ಷಕರ ಕ್ರಿಯಾಶೀಲತೆಯೆಲ್ಲ ಇಂಥ ಚಟುವಟಿಕೆಗಳಲ್ಲೇ ಸೋರಿಹೋದರೆ ಪಾಠ ಹೇಳಲು ಅವರಿಗೆ ಹುಮ್ಮಸ್ಸಾದರೂ ಹೇಗೆ ಬರಬೇಕು ಎನ್ನುವ ಧ್ವನಿಯೂ ಅವರ ಮಾತಿನಲ್ಲಿ ಇಣುಕುತ್ತದೆ.

ಶಿಕ್ಷಕರನ್ನು ಹೇಗೆ ನಡೆಸಿಕೊಳ್ಳಬೇಕು ಎಂಬ ವಿಷಯವಾಗಿ ‘ಅಜೀಂ ಪ್ರೇಮ್‌ಜಿ ವಿಶ್ವವಿದ್ಯಾಲಯ’ದ ಕುಲಪತಿ ಅನುರಾಗ್ ಬೆಹರ್ ಬಲು ಸೊಗಸಾಗಿ ಹೇಳುತ್ತಾರೆ. ‘ಶಾಲೆಯ ಮೂಲ ಸೌಕರ್ಯ ಎಷ್ಟೇ ಕೆಟ್ಟದಾಗಿದ್ದರೂ ಶಿಕ್ಷಕ ಒಳ್ಳೆಯವನಾಗಿದ್ದರೆ ಶಾಲೆ ಚೆನ್ನಾಗಿರುತ್ತದೆ. ಸಾಮರ್ಥ್ಯ ಹಾಗೂ ಆಸಕ್ತಿಗಳನ್ನು ವೃದ್ಧಿಸುವ ಮೂಲಕ ಒಳ್ಳೆಯ ಶಿಕ್ಷಕರನ್ನು ರೂಪಿಸಲು ಸಾಧ್ಯ’ ಎಂದು ಅವರು ಪ್ರತಿಪಾದಿಸುತ್ತಾರೆ.

ಸಾಮರ್ಥ್ಯ ಮತ್ತು ಆಸಕ್ತಿ ಒಂದಕ್ಕೊಂದು ಪೂರಕ ಸಂಬಂಧ ಹೊಂದಿವೆ. ಸಾಮರ್ಥ್ಯ ಹೆಚ್ಚಿಸುವ ಕ್ರಿಯೆ ಸೇವಾಪೂರ್ವದ ತರಬೇತಿ ಹಂತದಲ್ಲಿಯೇ ಆರಂಭವಾಗುತ್ತದೆ. ಇನ್ನು ವೃತ್ತಿಯಲ್ಲಿ ಆಸಕ್ತಿ ಹುಟ್ಟಿಸಲು ಶಿಕ್ಷಕರು ಇಡೀ

## ಒಂದು ಸಮುದಾಯ; ಹತ್ತಾರು ಸಮಸ್ಯೆ

ಶಿಕ್ಷಕರ ಸಮುದಾಯ ಅನ್ಯ ಕೆಲಸಗಳ ಹೊರೆಯಿಂದ ಮಾತ್ರ ಬಳಲುತ್ತಿಲ್ಲ. ಗೊಂದಲಮಯ ವರ್ಗಾವಣೆ ಪ್ರಕ್ರಿಯೆ, ಶಾಲಾ ಮೇಲುಸ್ತುವಾರಿ ಸಮಿತಿಗಳ (ಎಸ್‌ಡಿಎಂಸಿ) ಯಜಮಾನಿಕೆ, ವೇತನ ತಾರತಮ್ಯ, ಹದ್ದುಬಸ್ತಿಗೆ ಸಿಗದ ಲಂಚಾವತಾರ, ಯಾವ ರಾಜಕೀಯ ಪಕ್ಷಗಳಿಗೂ ಕಡಿಮೆ ಇಲ್ಲದಂತಿರುವ ಗುಂಪುಗಾರಿಕೆ – ಹೀಗೆ ಹಲವು ಸಮಸ್ಯೆಗಳ ಸುಳಿಯಲ್ಲಿ ಸಿಕ್ಕು ಒದ್ದಾಡುತ್ತಿದೆ. ಅವುಗಳಿಂದಲೂ ಮುಕ್ತಿ ಬೇಕು ಎಂದು ಮುಗ್ಧ ಶಿಕ್ಷಕರು ಬಯಸುತ್ತಿದ್ದಾರೆ.

### ನಲಿಕಲಿ ಮೂಲೆಗುಂಪು

ಸದ್ಯ ಸರ್ಕಾರಿ ಶಾಲೆಗಳಲ್ಲಿ ಮಾತ್ರ ಅನುಷ್ಠಾನದಲ್ಲಿರುವ ನಲಿಕಲಿ ಯೋಜನೆಯನ್ನು ರದ್ದುಗೊಳಿಸಬೇಕು ಎಂಬ ಒತ್ತಾಯವೂ ಕೇಳಿಬಂದಿದೆ. 1, 2 ಹಾಗೂ 3ನೇ ತರಗತಿ ಮಕ್ಕಳನ್ನು ಒಟ್ಟಾಗಿ ಕೂರಿಸಿ ಬೋಧಿಸುವ ಈ ಕ್ರಮಕ್ಕೆ ಪೋಷಕರಿಂದಲೂ ವಿರೋಧ ವ್ಯಕ್ತವಾಗಿದೆ.

ನಲಿಕಲಿ ಯೋಜನೆಯಿಂದ ಮಕ್ಕಳು ತುಂಬಾ ವೇಗದಲ್ಲಿ ಭಾಷಾಪ್ರಭುತ್ವವನ್ನು ಪಡೆಯಲು ಸಾಧ್ಯವಿದೆ. ಆದರೆ, ಈ ಬೋಧನಾ ಪದ್ಧತಿಯನ್ನು ಶಿಕ್ಷಕನಿಗೆ, ಶಿಕ್ಷಕನ ಅನನ್ಯತೆಗೆ ಯಾವುದೇ ಅವಕಾಶವಿಲ್ಲದಂತೆ ರೂಪಿಸಲಾಗಿದೆ ಎಂದು ಶಿಕ್ಷಣತಜ್ಞರು ವಾದಿಸುತ್ತಾರೆ.

ಶಿಕ್ಷಕ ಮತ್ತು ವಿದ್ಯಾರ್ಥಿಯ ನಡುವೆ ಸೃಜನಶೀಲ ಮಾಧ್ಯಮವಾಗಬೇಕಿದ್ದ ಈ ವಿಧಾನ ಈಗ ಮೂಲೆಗುಂಪಾಗುವ ಸ್ಥಿತಿಗೆ ತಲುಪಿದೆ. ಶಿಕ್ಷಕರ ಸಾಮರ್ಥ್ಯವನ್ನು ಗೌರವಿಸಿ ಕಲಿಸುವ ಪೂರ್ಣ ಸ್ವಾತಂತ್ರ್ಯ ಕೊಟ್ಟಿದ್ದರೆ ಮಕ್ಕಳಿಗೆ ನಿಜವಾದ ಗುಣಾತ್ಮಕ ಶಿಕ್ಷಣ ಸಿಗುತ್ತಿತ್ತು ಎಂದು ಅವರು ಹೇಳುತ್ತಾರೆ.

ನಲಿಕಲಿ ಯೋಜನೆಗಾಗಿ ಒದಗಿಸಿದ ಬೋಧನಾ ಸಲಕರಣೆಗಳು ಕಳಪೆಯಾಗಿವೆ. ಶಿಕ್ಷಣಕ್ಕಾಗಿ ಪ್ರತಿವರ್ಷ ಸಾವಿರ ಸಾವಿರ ಕೋಟಿ ರೂಪಾಯಿ ಲೆಕ್ಕದಲ್ಲಿ ಮಾತನಾಡುವ ನಮ್ಮ ಆಡಳಿತ ವ್ಯವಸ್ಥೆ ಮಕ್ಕಳು ಓದಲು ಗುಣಮಟ್ಟದ ಪುಸ್ತಕಗಳನ್ನು, ಒಳ್ಳೆಯ ಬಟ್ಟೆಗಳನ್ನು ಕೊಡಲಾಗದ ಬಡತನದಲ್ಲಿದೆ ಎಂದು ಅವರು ವಿಶ್ಲೇಷಿಸುತ್ತಾರೆ.




ಶ್ರೀ ಪಂಚಮುಖಿ ಜ್ಯೋತಿಷ್ಯಂ



INDIA'S MOST POPULAR ASTROLOGER

ಪಂಡಿತ. ಶ್ರೀ ಗಣೇಶ್ ಕುಮಾರ್ ಶ್ರೀ ಶ್ರೀ ಹನುಮಾನ್ ಆರಾಧಕರು

ಕೇರಳ, ಕಲ್ಕತ್ತಾದ ಸಾವಿರಾರು ವರ್ಷಗಳ ಹಿಂದಿನ ಪ್ರಾಚೀನ ನಾಡಿಗ್ರಂಥ ಆಧಾರದಿಂದ ಸರ್ವಮಂತ್ರ ವಿದ್ಯೆ, ಜ್ಯೋತಿಷ್ಯ ಶಾಸ್ತ್ರ ಪಂಚಮಹಾಗುರುಗಳ ಬೋಧನೆಯಿಂದ ಯೋಗ ಯಜ್ಞಗಳ ಮೂಲಕ ಸರ್ವ ವಿದ್ಯೆಯನ್ನು ತಮ್ಮ ವಶದಲ್ಲಿರಿಸಿಕೊಂಡಿರುವವರು. ವಶೀಕರಣ, ಮದುವೆ, ಸಂತಾನ, ದಾಂಪತ್ಯ, ಪ್ರೇಮವಿಚಾರ, ಲೈಂಗಿಕ, ಮಾನಸಿಕ, ಗೃಹಶಾಂತಿ, ವಿದ್ಯೆ, ಆರೋಗ್ಯ, ವಿದೇಶ ಪ್ರಯಾಣ, ಹಣಕಾಸು, ವ್ಯಾಪಾರ,ಉದ್ಯೋಗ, ಕೋರ್ಟ್ ಕೇಸು, ಸಾಲಬಾಧೆ, ಮಾಟಬಾಧೆ, ಶತ್ರುಕಾಟ, ಅಲ್ಲದೆ ರಾಜಯೋಗ ವಶ ಮತ್ತು ಅಖಂಡ ಯೋಗವಶಗಳು, ಇನ್ನಿತರ ನಿಮ್ಮ ಯಾವುದೇ ಕಠಿಣ, ನಿಗೂಢ ಮತ್ತು ಗುಪ್ತ ಸಮಸ್ಯೆಗಳಿಗೆ, ಸಲಹೆ ಮತ್ತು ಪರಿಹಾರ ಶತಸಿದ್ಧ.

600 ವರ್ಷ ಹಳೆಯ ಪಂಚಸಿದ್ಧಿ ತಂತ್ರಗಳಿಂದ ನಿಮ್ಮ ದುಶ್ಚಟ, ದೀರ್ಘಾವಧಿ, ಲೈಂಗಿಕ, ಸಂತಾನ, ಸಮಸ್ಯೆಗಳಿಗೆ ಸನಾತನ ಪ್ರಕ್ರಿಯೆಗಳಿಂದ ಅತೀ ಶೀಘ್ರದಲ್ಲಿ ಸಮಗ್ರ ಪರಿಹಾರ ಕಲ್ಪಿಸುತ್ತಿರುವವರು.

ವಿ.ಸೂ.: ಇಲ್ಲಿ ಹೇಳುವ ವಿಷಯಗಳೆಲ್ಲವೂ ಗುಪ್ತವಾಗಿರುವುದರಿಂದ ನಿಮ್ಮ ಯಾವುದೇ ಸಮಸ್ಯೆಗಳನ್ನು ಹೇಳಲು ಹಿಂಜರಿಯಬೇಕಾಗಿಲ್ಲ. ದೂರವಾಣಿ ಹಾಗೂ ಪತ್ರದ ಮೂಲಕ ವಿವರಗಳನ್ನು ಪಡೆಯಬಹುದು.

ಬೆಂಗಳೂರು ಖಾಯಂ ಮನೆ ವಿಳಾಸ ನಂ.167/3, ಮೊದಲನೇ ಮಹಡಿ, 1ನೇ ಮುಖ್ಯರಸ್ತೆ, 9ನೇ ಅಡ್ಡರಸ್ತೆ, ಮುತ್ತುರಾಯಸ್ವಾಮಿ ದೇವಸ್ಥಾನದ ಹತ್ತಿರ, ಮೈಸೂರು ಸರ್ಕಲ್, (ಸಿರಸಿ ವೃತ್ತ), ಚಾಮರಾಜಪೇಟೆ, ಬೆಂಗಳೂರು-18.

ಮೈಸೂರಿನಲ್ಲಿಯೂ ಲಭ್ಯವಿರುತ್ತಾರೆ

ಸಮಸ್ಯೆ ಏನೇ ಇರಲಿ, ಎಷ್ಟೇ ಕಠಿಣವಾಗಿರಲಿ 600 ವರ್ಷಗಳ ಹಳೆಯ 108 ಜ್ಯೋತಿಷ್ಯ ತಂತ್ರಗಳಿಂದ ಮಹೋನ್ನತ ಪರಿಹಾರಗಳು.

ಬೆಂಗಳೂರು ಮೈಸೂರು 9880444450